## 25. 10 ಪ್ರಯೋಗಾಲಯಗಳು ಶೀಘ್ರ ಆರಂಭ

ಪ್ರತಿ ಜಿಲ್ಲೆಯಲ್ಲಿಯೂ ಕನಿಷ್ಠ ಎರಡು ಹಾಗೂ ವೈದ್ಯಕೀಯ ಕಾಲೇಜಿನಲ್ಲಿ ಒಂದು ಪ್ರಯೋಗಾಲಯ ಇರಬೇಕೆಂದು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಸೂಚಿಸಿದೆ. ಈ ತಿಂಗಳ ಅಂತ್ಯಕ್ಕೆ ಹೊಸದಾಗಿ 10 ಪರೀಕ್ಷಾ ಪ್ರಯೋಗಾಲಯ ಆರಂಭಿಸಲಾಗುವುದು ಎಂದು ಸಚಿವ ಎಸ್. ಸುರೇಶ್ ಕುಮಾರ್ ತಿಳಿಸಿದರು.

ಸದ್ಯ 11 ಸರ್ಕಾರಿ, 5 ಖಾಸಗಿ ಪ್ರಯೋಗಾಲಯಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಸೋಂಕು ಹರಡುವಿಕೆ ತಡೆಯುವ ಉದ್ದೇಶದಿಂದ ಕೊರೊನಾ ಮುಕ್ತ ಜಿಲ್ಲೆಗಳಲ್ಲಿ ಕೂಡ ಕೋವಿಡ್–19 ಪರೀಕ್ಷೆಗಳನ್ನು ಮಾಡಲು ನಿರ್ಧರಿಸಲಾಗಿದೆ. ಜ್ವರ ಸೇರಿದಂತೆ ಸೋಂಕು ಲಕ್ಷಣ ಇರುವವರನ್ನು ಗುರುತಿಸಿ, ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಈ ಸಂಬಂಧ ಅಗತ್ಯ ಪರೀಕ್ಷಾ ಕಿಟ್‌ಗಳನ್ನು ದಾಸ್ತಾನು ಮಾಡಿಕೊಳ್ಳಲಾಗುವುದು. ನಂಜನಗೂಡಿನ ಫಾರ್ಮಾ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 1,705 ಮಂದಿಯನ್ನು ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ. ಅದರಲ್ಲಿ 1,225 ಮಂದಿಗೆ ಪರೀಕ್ಷೆ ಮಾಡಲಾಗಿದ್ದು, 61 ಮಂದಿಗೆ ಈವರೆಗೆ ಸೋಂಕು ದೃಢಪಟ್ಟಿದೆ. 480 ಮಂದಿಯ ವರದಿ ಬರಬೇಕಿದೆ ಎಂದು ಮಾಹಿತಿ ನೀಡಿದರು.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಜ್ಞ ವೈದ್ಯರ ಜೊತೆಗೆ ಸಭೆ ನಡೆಸಿ ಸಲಹೆಗಳನ್ನು ಪಡೆದಿದ್ದಾರೆ. ಡಾ:ಸುದರ್ಶನ್ ಬಲ್ಲಾಳ್, ಡಾ:ಗಂಗಾಧರ್, ಡಾ:ರವಿ, ಡಾ: ಪ್ರದೀಪ್, ಡಾ: ಸುದರ್ಶನ್ ಸಭೆಯಲ್ಲಿ ಪಾಲ್ಗೊಂಡಿದ್ದು ಪ್ರಾರಂಭಿಕ ಹಂತದಲ್ಲಿ ರೋಗ ಪತ್ತೆ ಮಾಡಿದಲ್ಲಿ ವ್ಯಕ್ತಿಗೆ ಅಗತ್ಯ ಚಿಕಿತ್ಸೆಯನ್ನು ನೀಡಿ ಜೀವ ಉಳಿಸಿಕೊಳ್ಳಬಹುದು ಎಂಬ ಅಭಿಮತವನ್ನು ವ್ಯಕ್ತಪಡಿಸಿದ್ದಾರೆ.

ಎಲ್ಲ ರೋಗಿಗಳು ಲಕ್ಷಣ ಕಾಣಿಸಿಕೊಂಡ ನಾಲ್ಕು ದಿನಗಳ ಬಳಿಕ ಆಸ್ಪತ್ರೆಗಳಿಗೆ ಬರುತ್ತಿದ್ದಾರೆ. ಲಕ್ಷಣಗಳು ಕಾಣಿಸಿಕೊಂಡ ಕೂಡಲೇ ಫೀವರ್ ಕ್ಲಿನಿಕ್‌ಗಳಿಗೆ ಹೋಗಿ ವೈದ್ಯರನ್ನು ಸಂಪರ್ಕಿಸುವಂತೆ ನೋಡಿಕೊಳ್ಳಬೇಕು, ತೀವ್ರನಿಗಾ ಘಟಕದಲ್ಲಿ ಇರುವವರ ಚಿಕಿತ್ಸೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿ ವಿಶೇಷ ಪರೀಕ್ಷೆ ನಡೆಸಬೇಕೆಂಬ ಸಲಹೆಯನ್ನು ವೈದ್ಯರು ನೀಡಿದ್ದಾರೆ ಎಂದು ಸಚಿವ ಎಸ್. ಸುರೇಶ್ ಕುಮಾರ್ ಮಾಹಿತಿ ನೀಡಿದರು.

ಆಧಾರ:ಪ್ರಜಾವಾಣಿ, ದಿನಾಂಕ:18.04.2020